# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1127 |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 25.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿ ಯೋಜನೆಯ ಐನಾಪೂರ ಏತ ನೀರಾವರಿ ಯೋಜನೆಯ ವರದಿಗೆ ಆಡಳಿತಾತ್ಮಕ ಅನುಮೋದನೆ ಯಾವಾಗ ನೀಡಲಾಗಿದೆ; ಹಾಗೂ ಸದರಿ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಾಗ ನಿಗದಿ ಪಡಿಸಲಾದ ಹಣ ಎಷ್ಟು; | ರೂ. 204.10 ಕೋಟಿ ಮೊತ್ತದ ಐನಾಪೂರ ಏತ ನೀರಾವರಿ ಯೋಜನೆಗೆ ಸರ್ಕಾರದ ಆದೇಶ ದಿನಾಂಕ:09.01.2023ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. |
| ಆ) | ಕೃಷ್ಣಾ ನ್ಯಾಯಾಧಿಕರಣದನ್ವಯ ಕೆಳದಂಡೆ ಮುಲ್ಲಾಮಾರಿ ಯೋಜನೆಗೆ ಹಂಚಿಕೆಯಾದ ನೀರಿನ ಪ್ರಮಾಣ ಎಷ್ಟು; ಇದರಲ್ಲಿ ಸದರಿ ಐನಾಪೂರ ಏತ ನೀರಾವರಿ ಯೋಜನೆಗೆ ನಿಗದಿ ಪಡಿಸಲಾದ ನೀರಿನ ಪ್ರಮಾಣ ಎಷ್ಟು; ಈ ಯೋಜನೆಯಿಂದ ಚಿಂಚೋಳಿ ತಾಲ್ಲೂಕಿನ ಎಷ್ಟು ಹಳ್ಳಿಗಳ ಎಷ್ಟು ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಬಹುದಾಗಿದೆ; | ಕೃಷ್ಣಾ ನ್ಯಾಯಾಧಿಕರಣದ (ಬಚಾವತ್) ತೀರ್ಪಿನನ್ವಯ ರಾಜ್ಯಕ್ಕೆ ಒಟ್ಟಾರೆ ಹಂಚಿಕೆಯಾಗಿರುವ 734 ಟಿಎಂಸಿ ನೀರಿನ ಪ್ರಮಾಣದಲ್ಲಿ ಕೆಳದಂಡೆ ಮುಲ್ಲಾಮಾರಿ ಯೋಜನೆಗೆ 2.61 ಟಿಎಂಸಿ ಹಂಚಿಕೆಯಾಗಿದ್ದು, ಸದರಿ ಪ್ರಮಾಣದಲ್ಲಿ 0.34 TMC ನೀರನ್ನು ಐನಾಪೂರ ಏತ ನೀರಾವರಿ ಯೋಜನೆಗೆ ಹಂಚಿಕೆ ಮಾಡಲಾಗಿದೆ.<br>ಐನಾಪೂರ ಏತ ನೀರಾವರಿ ಯೋಜನೆಯಡಿ ಚಿಂಚೋಳಿ ತಾಲ್ಲೂಕಿನ ಐನಾಪುರ ಮತ್ತು 17 ಗ್ರಾಮಗಳ ಸುಮಾರು 3,710 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಯೋಜಿಸಲಾಗಿದೆ. |
| ಇ) | ಸದರಿ ಯೋಜನೆಯ ಕಾಮಗಾರಿ ಮುಗಿಸಲು ಬೇಕಾಗುವ ಕಾಲಾವಧಿ ಎಷ್ಟು; ಈ ಸಂಬಂಧ ಸದರಿ ಯೋಜನೆಯ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಸರ್ಕಾರದಿಂದ ಅನುಮೋದನೆ ನೀಡಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಮೊತ್ತದ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಸರ್ಕಾರದ ಅನುಮೋದನೆ ನೀಡಿದೆ | ಸದರಿ ಯೋಜನೆಗೆ ಮೊದಲನೇ ಹಂತದಲ್ಲಿ ರೂ.125.25 ಕೋಟಿ ಹಾಗೂ ಎರಡನೇ ಹಂತದಲ್ಲಿ ರೂ.78.85 ಕೋಟಿ ಮೊತ್ತದ ಕಾಮಗಾರಿ ಕೈಗೆತ್ತಿಕೊಳ್ಳಲು ಅನುಮೋದನೆ ನೀಡಿ, ಮೊದಲನೇ ಹಂತದ ಕಾಮಗಾರಿಗಳಿಗೆ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.<br>ಸದರಿ ಕಾಮಗಾರಿಯನ್ನು ಕೈಗೊಳ್ಳಲು 18 ತಿಂಗಳ ಕಾಲಾವಕಾಶ ನೀಡಿ ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿರುತ್ತದೆ. |
| ಈ) | ಈ ಯೋಜನೆ ಪ್ರಾರಂಭವಾಗದಿರುವ ಕುರಿತು ಯೋಜನಾ ವ್ಯಾಪ್ತಿಯ ರೈತರು ಸಹಿ ಸಂಗ್ರಹ ಚಳುವಳಿ ಪ್ರಾರಂಭ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ಹಾಗೂ 2024-25ನೇ ಮುಂಗಡ ಪತ್ರದಲ್ಲಿ ಈ ಯೋಜನೆಗೆ ಅಗತ್ಯವಾದ ಅನುದಾನ ಒದಗಿಸಲಾಗುವುದೇ? (ವಿವರ ನೀಡುವುದು) | ಸದರಿ ಯೋಜನೆಯ ಮೊದಲನೇ ಹಂತದ ರೂ.125.25 ಕೋಟಿ ಮೊತ್ತದ ಕಾಮಗಾರಿಗೆ ಟೆಂಡರ್ ಆಹ್ವಾನಿಸಲಾಗಿದ್ದು, ಆರ್ಥಿಕ ಬಿಡ್ ಮೌಲ್ಯ ಮಾಪನ ವರದಿಗೆ ಅನುಮೋದನೆ ಪಡೆಯಲು ದಿನಾಂಕ:26.12.2023 ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮದ ನಿರ್ದೇಶಕರ ಮಂಡಳಿಯ 102ನೇ ಸಭೆಯಲ್ಲಿ ಮಂಡಿಸಲಾಗಿ, ವಿಷಯವನ್ನು ಮುಂದೂಡಲಾಗಿರುತ್ತದೆ. ಆದ್ದರಿಂದ, ನಿಗಮದ ನಿರ್ದೇಶಕರ ಮಂಡಳಿಯ ಮುಂದಿನ ಸಭೆಯಲ್ಲಿ ಪರಿಶೀಲಿಸಲಾಗುವುದು. |

ಸಂಖ್ಯೆ:ಜಸಂಇ 101 ಎಂಎಲ್ಎ 2024

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ